ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಅಧಿಕಾರಿ/ಸಿಬ್ಬಂದಿಗಳ ನಿಯೋಜನೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-

835 (917) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪಶುಸಂಗೋಪನೆ ಇಲಾಖೆಯಲ್ಲಿ ಕೆಲಸ ನಿರ್ವಹಿಸಬೇಕಾದ ವೈದ್ಯಾಧಿಕಾರಿಗಳು ಅನ್ಯ ಇಲಾಖೆಯಲ್ಲಿ ನಿಯೋಜನೆ ಅಥವಾ ಅನ್ಯ ಕಾರ್ಯಭಾರದ ಮೇಲೆ (ಓಓಡಿ) ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ಪೂರ್ಣ ಮಾಹಿತಿ ಒದಗಿಸುವುದು)

(ಆ) ಅನ್ಯ ಇಲಾಖೆಗಳಲ್ಲಿ ನಿಯೋಜನೆ/ಅನ್ಯ ಕಾರ್ಯಭಾರದ ಮೇಲೆ ಕೆಲಸ ನಿರ್ವಹಿಸಬಾರದೆಂದು ಆದೇಶವಿದ್ದರೂ ಸಹ ಬೇರೆ ಇಲಾಖೆಗಳ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇವರುಗಳನ್ನು ಸರ್ಕಾರದ ನಿಯಮಾವಳಿಯ ಪ್ರಕಾರ ಹಿಂಪಡೆಯಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ; ಈ ಕುರಿತು ಇರುವ ಸರ್ಕಾರದ ನಿಯಮಾವಳಿಯ ಪ್ರತಿಯನ್ನು ಒದಗಿಸುವುದು ?